ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಮೂರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 19ನೇ ಫೆಬ್ರವರಿ, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

ಆ) ದಿನಾಂಕ 17.02.2014ರ ಆರನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 88(1346) : ಗ್ರಾಮೀಣಾಭಿವೃದ್ಧಿ ಮತ್ತು ಹಾಗೂ ಪಂಚಾಯತ್ ರಾಜ್ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು) ಅವರು:-

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2013ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ರಾಜಸ್ವ ವಿಭಾಗ ಮೇಲಿನ ವರದಿ ಮತ್ತು ಆರ್ಥಿಕ ವಲಯ ವರದಿಗಳನ್ನು ಸಭೆಯ ಮುಂದಿಡುವುದು.

3. ಚುನಾವಣಾ ಪ್ರಸ್ತಾವ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರು) ಅವರು:-

1965ರ ಕರ್ನಾಟಕ ಸಾರ್ವಜನಿಕ ಗ್ರಂಥಾಲಯ ಕಾಯ್ದೆ ಕಲಂ-3ರ ಮೇರೆಗೆ ಅವಶ್ಯಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ಗ್ರಂಥಾಲಯ ಪ್ರಾಧಿಕಾರಕ್ಕೆ ನಾಲ್ಕು ವಿಧಾನಸಭಾ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

4. ವಿತ್ತೀಯ ಕಾರ್ಯಕಲಾಪಗಳು

2014–15ನೇ ಸಾಲಿನ ಆಯವ್ಯಯದ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು ಮಾಗಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಾಮನಗರ ತಾಲ್ಲೂಕು ಬಿಡದಿ ಹೋಬಳಿಯ ಎಲ್ಲಾ ಪಂಚಾಯತಿಗಳ ಗ್ರಾಮಗಳಿಗೆ ನಿರಂತರ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

2. ಶ್ರೀ ಮಾಲಿಕಯ್ಯ ವಿ. ಗುತ್ತೇದಾರ ಅವರು ಗುಲಬರ್ಗಾ ಜಿಲ್ಲೆಯಲ್ಲಿ ಬಹಳಷ್ಟು ಸಹಕಾರ ಸಂಘಗಳು, ಡಿ.ಸಿ.ಸಿ ಬ್ಯಾಂಕ್‌ಗಳು ಹಾಗೂ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬರುವ ಸಹಕಾರ ಸಂಘಗಳ ಸೊಸೈಟಿಯಲ್ಲಿ ಕೆಲವೇ ವ್ಯಕ್ತಿಗಳಿಗೆ ಸಾಲ ಸೌಲಭ್ಯ ದೊರೆಯುತ್ತಿದ್ದು ಇತರೆ ಬಡ ವರ್ಗದ ರೈತರಿಗೆ ಸಾಲ ಸೌಲಭ್ಯಗಳು ದೊರೆಯದಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

3. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ಸರ್ಕಾರಿ ಆದೇಶ ಸಂಖ್ಯೆ ಎಸ್.ಇ.ಇ. 5 ಎಫ್ ಜಿ ಎಲ್, 90 ದಿನಾಂಕ: 05.05.1997ರ ಪ್ರಕಾರ 14,848.83 ಹೆಕ್ಟರ್ ಅರಣ್ಯ ಭೂಮಿಯನ್ನು 1978ಕ್ಕಿಂತ ಪೂರ್ವದಲ್ಲಿ ಸಾಗುವಳಿ ಮಾಡಿದ ಸಾಗುವಳಿದಾರರಿಗೆ ಕೇಂದ್ರ ಸರ್ಕಾರದ ಅರಣ್ಯ ಸಂರಕ್ಷಣಾ ಕಾಯ್ದೆ 1980ರ ಪ್ರಕಾರ ಹಕ್ಕು ಪತ್ರ ನೀಡಲು ಕ್ರಮ ಕೈಗೊಳ್ಳದಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಮನೋಹರ ಹೆಚ್. ತಹಸೀಲ್ದಾರ್ ಅವರು ಹಾವೇರಿ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಹಿಂದಿನ ಸರ್ಕಾರ ಆಯವ್ಯಯದಲ್ಲಿ ಘೋಷಿಸಿದ್ದರೂ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸದೆ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ಯು.ಬಿ. ಬಣಕಾರ್ ಅವರು ಹಾವೇರಿ ಜಿಲ್ಲೆ ರೈತರು ಕಳಪೆ ಹತ್ತಿ ಬೀಜ ಮತ್ತು ಮೆಕ್ಕೆಜೋಳದಿಂದ ಬೆಳೆ ನಷ್ಟವನ್ನು ಅನುಭವಿಸುತ್ತಿದ್ದು ಇವರಿಗೆ ಬೆಳೆ ವಿಮಾ ತಾರತಮ್ಯವನ್ನು ಸರಿಪಡಿಸಿ ಪರಿಹಾರ ಹಣವನ್ನು ನಿಗದಿ ಮಾಡುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

6. ಶ್ರೀ ಎನ್.ಚಲುವರಾಯ ಸ್ವಾಮಿ ಅವರು ರಾಜ್ಯಕ್ಕೆ ಕೇಂದ್ರದಿಂದ ಮಂಜೂರಾಗಿರುವ ಐ.ಸಿ.ಡಿ.ಎಸ್. ಯೋಜನೆಗಳನ್ನು ಜಾರಿಗೆ ತರುವ ಬಗ್ಗೆ ಹಾಗೂ ಅಂಗನವಾಡಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಖಾಸಗೀಕರಣ ಮಾಡುವುದನ್ನು ಕೈಬಿಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನದ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

7. ಶ್ರೀ ಹೆಚ್.ಡಿ.ರೇವಣ್ಣ ಮತ್ತು ಕೆ.ಎಂ.ಶಿವಲಿಂಗೇಗೌಡ ಅವರುಗಳು ಹಾಸನ ನಗರದಲ್ಲಿ ಜಿಲ್ಲಾ ನ್ಯಾಯಾಲಯದ ಸಂಕೀರ್ಣ ಕಟ್ಟಡದ ನಿರ್ಮಾಣದ ಕಾಮಗಾರಿಯನ್ನು ಅನುದಾನದ ಕೊರತೆಯಿಂದ ಪೂರ್ಣಗೊಳಸದಿರುವುದರಿಂದ ಪ್ರಸಕ್ತ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡಿ ಸದರಿ ಕಾಮಗಾರಿಯನ್ನು ಪೂರ್ಣಗೊಳಸುವ ಬಗ್ಗೆ ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)